# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಬಿ.ಜಿ ಪಾಟೀಲ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 718 |
| ಉತ್ತರಿಸಬೇಕಾದ ದಿನಾಂಕ | : | 22.02.2023 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ಯಾದಗಿರಿ ಜಿಲ್ಲೆಯಲ್ಲಿ ಹೈನುಗಾರಿಕೆ ಸಾಕಷ್ಟು ಅವಕಾಶ ಬಂದಿದ್ದಲ್ಲಿ ಪ್ರೋತ್ಸಾಹ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದ್ದಲ್ಲಿ ವಿಳಂಬ ಧೋರಣೆ ತಾಳಲು ಕಾರಣವೇನು ಈ ಬಗ್ಗೆ ಸರ್ಕಾರ ಕೈಗೊಂಡಿರುವ ಅಗತ್ಯ ಕ್ರಮಗಳಾವುವು: (ವಿವರ ನೀಡುವುದು) | ಯಾದಗಿರಿ ಜಿಲ್ಲೆಯಲ್ಲಿ ಹೈನುಗಾರಿಕೆಗೆ ಸಾಕಷ್ಟು ಪ್ರೋತ್ಸಾಹ ನೀಡಲಾಗುತ್ತಿದೆ.<br><br>ರಾಷ್ಟ್ರೀಯ ಹಾಗೂ ರಾಜ್ಯವಲಯದ ಹೈನುಗಾರಿಕೆ ಯೋಜನೆಗಳನ್ನು ಪ್ರೋತ್ಸಾಹಿಸಲಾಗುತ್ತಿದೆ. ಹೈನುಗಾರಿಕೆ ಪ್ರೋತ್ಸಾಹಿಸಲು ಸರ್ಕಾರದಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>1. ಹಾಲು ಉತ್ಪಾದಕರಿಗೆ ಉತ್ತೇಜನ ಯೋಜನೆಯಡಿಯಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಹಾಲು ಪೂರೈಸುವ ಸದಸ್ಯರಿಗೆ ಪ್ರತಿ ಲೀಟರ್ ಹಾಲಿಗೆ ರೂ.5/- ಪ್ರೋತ್ಸಾಹ ಧನ ನೀಡಲಾಗುತ್ತಿದೆ.<br>2. ಗುರುತಿಸಲ್ಪಟ್ಟ ಸಾಂಕ್ರಾಮಿಕ ರೋಗಗಳಾದ ಕಾಲು ಬಾಯಿ ಜ್ವರ, ಗಳಲೇ ರೋಗ ಮತ್ತು ಕಂದು ರೋಗದ ವಿರುದ್ದ ಲಸಿಕೆ ಹಾಕಲಾಗುತ್ತಿದೆ.<br>3. ಉಚಿತ ಜಾನುವಾರು ಚಿಕಿತ್ಸಾ ಶಿಬಿರಗಳನ್ನು ಏರ್ಪಡಿಸುವ ಮೂಲಕ ಜಾನುವಾರುಗಳ ಆರೋಗ್ಯ ತಪಾಸಣೆ ಮಾಡಲಾಗುತ್ತಿದೆ.<br>4. ರಾಷ್ಟ್ರೀಯ ಜಾನುವಾರು ಮಿಷನ್ (ಕೇಂದ್ರ ಪುರಸ್ಕೃತ ಯೋಜನೆ) ಯಡಿ ಜಾನುವಾರುಗಳಿಗೆ ವಿಮಾ ಸೌಲಭ್ಯ ಒದಗಿಸಲಾಗಿದೆ.<br>5. ಪಶುಪಾಲಕರ ಮನೆ ಬಾಗಿಲ್ಲಲಿ ರೋಗಗ್ರಸ್ಥ ಜಾನುವಾರುಗಳಿಗೆ ವಿಷೇಶ ತುರ್ತು ಚಿಕಿತ್ಸೆ ನೀಡಲು ಸುಸಜ್ಜಿತ ಪಶುಚಿಕಿತ್ಸಾ ವಾಹನಗಳನ್ನು ಒದಗಿಸಲಾಗಿದೆ.<br>6. ರಾಷ್ಟೀಯ ಜಾನುವಾರು ಕೃತಕ ಗರ್ಭಧಾರಣೆ ಯೋಜನೆಯಡಿಯಲ್ಲಿ ಉತ್ಕೃಷ್ಟ ಮಟ್ಟದ ವಿರ್ಯನಳಿಕೆಗಳಿಂದ ಆಕಳು / ಎಮ್ಮೆಗಳಲ್ಲಿ ಕೃತಕ ಗರ್ಭಧಾರಣೆಯನ್ನು ಉಚಿತವಾಗಿ ಜಿಲ್ಲೆಯ ಎಲ್ಲಾ ಪಶುವೈದ್ಯಕೀಯ ಸಂಸ್ಥೆಯಲ್ಲಿ ಕೈಗೊಳ್ಳಲಾಗುತ್ತಿದೆ.<br>7. ಆರ್.ಕೆ.ವಿ.ವೈ. ಯೋಜನೆ ಅಡಿಯಲ್ಲಿ ಮುಖ್ಯಮಂತ್ರಿಗಳ ಅಮೃತ ಜೀವನ ಯೋಜನೆ. |

| | | |
|---|---|---|
| | | 8. ಎಸ್.ಸಿಎಸ್.ಪಿ. ಟಿಎಸ್.ಪಿ ಯೋಜನೆಯಡಿಯಲ್ಲಿ, ಹಾಲು ಉತ್ಪಾದಕರಿಗೆ ಉತ್ತೇಜನ ಕಾರ್ಯಕ್ರಮದಡಿಯಲ್ಲಿ ಒಂದು ಮಿಶ್ರತಳಿ ಹಸು ಅಥವಾ ಸುಧಾರಿತ ತಳಿ ಎಮ್ಮೆ ಘಟಕ.<br>9. ಮೇವಿನ ಬೀಜದ ವಿತರಣೆ.<br>10. ರಬ್ಬರ್ ನೆಲಹಾಸುಗಳ ವಿತರಣೆ.<br>11. ಮೇವು ಕತ್ತರಿಸುವ ಯಂತ್ರಗಳ ವಿತರಣೆ.<br>12. ಹಾಲು ಕರೆಯುವ ಯಂತ್ರಗಳ ವಿತರಣೆ. |
| ಆ | ಯಾದಗಿರಿ ಜಿಲ್ಲೆಯಲ್ಲಿ ಹೈನುಗಾರಿಕೆಯನ್ನು ಉತ್ತೇಜಿಸಲು ವಿಶೇಷ ಪ್ಯಾಕೇಜನ್ನು ಜಾರಿಗೆ ತರಲು ಸರ್ಕಾರ ಉದ್ದೇಶಿಸಿದೆಯೇ; | ಯಾದಗಿರಿ ಜಿಲ್ಲೆಗೆ ಹೈನುಗಾರಿಕೆ ಉತ್ತೇಜಿಸಲು ಯಾವುದೇ ವಿಶೇಷ ಪ್ಯಾಕೇಜ್ ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಇ | ಈ ಮೇಲ್ಕಂಡ ಜಿಲ್ಲೆಯಲ್ಲಿ ಹೈನುಗಾರಿಕೆ ಉತ್ತೇಜನೆಗೆ ಈಗಿರುವ ಪ್ರೋತ್ಸಾಹದಾಯಕ ಯೋಜನೆಗಳು ಯಾವುವು? (ವಿವರ ನೀಡುವುದು) | ಜಿಲ್ಲೆಯಲ್ಲಿ ಹೈನುಗಾರಿಕೆ ಉತ್ತೇಜನೆಗೆ ಈಗಿರುವ ಪ್ರೋತ್ಸಾಹದಾಯಕ ಯೋಜನೆಗಳು ಈ ಕೆಳಕಂಡಂತಿದೆ.<br>➢ ಮುಖ್ಯಮಂತ್ರಿಗಳ ಅಮೃತ ಜೀವನ ಯೋಜನೆಯಡಿಯಲ್ಲಿ 44 ಫಲಾನುಭವಿಗಳಿಗೆ ಮಿಶ್ರ ತಳಿ ಹಸು ಘಟಕಗಳನ್ನು ವಿತರಿಸಲಾಗಿರುತ್ತದೆ.<br>➢ ಎಸ್.ಸಿ.ಎಸ್.ಪಿ. ಟಿ.ಎಸ್.ಪಿ ಯೋಜನೆಯಡಿಯಲ್ಲಿ ಹಾಲು ಉತ್ಪಾದಕರಿಗೆ ಉತ್ತೇಜನ ಕಾರ್ಯಕ್ರಮದಡಿಯಲ್ಲಿ ಒಂದು ಮಿಶ್ರತಳಿ ಹಸು ಅಥವಾ ಸುಧಾರಿತ ತಳಿ ಎಮ್ಮೆ ಘಟಕ ವಿತರಣೆ.<br>➢ 20 ಮೇವು ಕತ್ತರಿಸುವ ಯಂತ್ರಗಳ ವಿತರಣೆ.<br>➢ ಹಾಲು ಕರೆಯುವ ಯಂತ್ರಗಳ ವಿತರಣೆ. |

**ಇ–ಪಸಂಮೀ 52 ಸಲೆವಿ 2023**

(ಪ್ರಭು ಬಿ. ಚವ್ಹಾಣ್)
ಪಶುಸಂಗೋಪನೆ ಸಚಿವರು